# ಕರ್ನಾಟಕದ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 453 |
| ಉತ್ತರಿಸಬೇಕಾದ ದಿನಾಂಕ | : 12.12.2024 |
| ಸದಸ್ಯರ ಹೆಸರು | : ಶ್ರೀ ಐವನ್ ಡಿ'ಸೋಜಾ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : ಮಾನ್ಯ ಮುಖ್ಯಮಂತ್ರಿಯವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ರಾಷ್ಟ್ರಮಟ್ಟದ ಕ್ರಿಕೆಟ್ ಕ್ರೀಡಾಂಗಣ ಸ್ಥಾಪಿಸಲು ಜಿಲ್ಲಾಡಳಿತ ಮತ್ತು ಕೆ.ಎಸ್.ಸಿ.ಎ. ಸ್ಥಳ ಗುರುತಿಸಿ, ಕ್ರೀಡಾಂಗಣ ಸ್ಥಾಪಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ; (ವಿವರ ನೀಡುವುದು) | ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣಕ್ಕಾಗಿ ದಕ್ಷಿಣ ಕನ್ನಡ ಜಿಲ್ಲೆ ಮಂಗಳೂರು ತಾಲ್ಲೂಕು ಕಾವೂರು ಗ್ರಾಮದ ಸರ್ವೆ ಸಂಖ್ಯೆ-112/1ಎ ರಲ್ಲಿ 0.83 ಎಕರೆ, 139/1 ರಲ್ಲಿ 0.49 ಎಕರೆ, 142/2 ರಲ್ಲಿ 0.47 ಎಕರೆ, 138 ರಲ್ಲಿ 0.83 ಎಕರೆ ಮತ್ತು 21 ರಲ್ಲಿ 6.97 ಎಕರೆ ಸೇರಿದಂತೆ ಒಟ್ಟು 9.59 ಎಕರೆ ಜಮೀನನ್ನು ಸಹಾಯಕ ಆಯುಕ್ತರು, ಮಂಗಳೂರು ಉಪ ವಿಭಾಗ, ಮಂಗಳೂರು ಇವರ ಕಛೇರಿ ನಡವಳಿ ಸಂಖ್ಯೆ: ಎಡಿಸ್.ಎಲ್.ಎನ್.ಡಿ.ಪಿ.ಡಿ.ಆರ್. 107/2021/ಇ-128540, ದಿನಾಂಕ: 23-02-2021 ರಂತೆ ಇಲಾಖೆಯ ಹೆಸರಿಗೆ ಕಾಯ್ದಿರಿಸಲಾಗಿರುತ್ತದೆ.<br><br>ದಿನಾಂಕ: 14-09-2021 ರಂದು ಜಿಲ್ಲಾಧಿಕಾರಿಗಳು, ದಕ್ಷಿಣ ಕನ್ನಡ ಜಿಲ್ಲೆ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಕ್ರಿಕೆಟ್ ಕ್ರೀಡಾಂಗಣ ಅಭಿವೃದ್ಧಿಪಡಿಸುವ ಸಂಬಂಧ ತಗಲುವ ವೆಚ್ಚವನ್ನು ದಕ್ಷಿಣ ಕನ್ನಡ ಕ್ರಿಕೆಟ್ ಸಂಸ್ಥೆಯು ಭರಿಸುವುದಾಗಿ ಒಪ್ಪಿಕೊಂಡಿರುತ್ತದೆ. ಅದರಂತೆ, ದಕ್ಷಿಣ ಕನ್ನಡ ಕ್ರಿಕೆಟ್ ಸಂಸ್ಥೆ ಮತ್ತು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ದಕ್ಷಿಣ ಕನ್ನಡ ಜಿಲ್ಲಾಡಳಿತ ಸೇರಿ ಒಡಂಬಡಿಕೆ ಮಾಡಿಕೊಂಡು, ಕ್ರೀಡಾಂಗಣದ ಅಭಿವೃದ್ಧಿಗೆ ಎಲ್ಲಾ ರೀತಿಯ ಕ್ರಮಗಳನ್ನು ಹಾಗೂ ದೈನಂದಿನ ಚಟುವಟಿಕೆಗಳನ್ನು ದಕ್ಷಿಣ ಕನ್ನಡ ಕ್ರಿಕೆಟ್ ಸಂಘಟನೆಯ ಕಾರ್ಯಕಾರಿ ಸಮಿತಿಯವರು ನಿರ್ವಹಿಸುವಂತೆ ತಿಳಿಸಲಾಗಿರುತ್ತದೆ.<br><br>ಮುಂದುವರೆದು, ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣಕ್ಕಾಗಿ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ಇವರಿಗೆ ಕಾಯ್ದಿರಿಸಲು ಉಳ್ಳಾಲ ತಾಲ್ಲೂಕು ಬಾಳೆಪುಣಿ ಗ್ರಾಮದ ಸರ್ವೆ ಸಂಖ್ಯೆ- 87/4 ರಲ್ಲಿ 9.17 ಎಕರೆ ಜಮೀನನ್ನು ಗುರುತಿಸಿದ್ದು, ಅಳತೆ ಕಾರ್ಯ ಪೂರ್ಣಗೊಂಡಿದ್ದು, ಜಮೀನನ್ನು ಕಾಯ್ದಿರಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ. |

| | | |
|---|---|---|
| ಆ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕ್ರಿಕೆಟ್ ಕ್ರೀಡಾಂಗಣಕ್ಕೆ ಬೇಕಾದ ಸ್ಥಳ ಮತ್ತು ಎಲ್ಲಾ ಮೂಲಭೂತ ಸೌಕರ್ಯ ಇದ್ದರೂ, ಜಿಲ್ಲಾಡಳಿತ ಯಾವುದೇ ಕ್ರಮ ವಹಿಸದೇ ಇರಲು ಕಾರಣಗಳೇನು; (ವಿವರ ನೀಡುವುದು) | ಮಂಗಳೂರು ತಾಲ್ಲೂಕು ಕಾವೂರು ಗ್ರಾಮದ ಸರ್ವೆ ಸಂಖ್ಯೆ-112/1ಎ ರಲ್ಲಿ 0.83 ಎಕರೆ, 139/1 ರಲ್ಲಿ 0.49 ಎಕರೆ, 142/2 ರಲ್ಲಿ 0.47 ಎಕರೆ, 138 ರಲ್ಲಿ 0.83 ಎಕರೆ ಮತ್ತು 21 ರಲ್ಲಿ 6.97 ಎಕರೆ ಸೇರಿದಂತೆ ಒಟ್ಟು 9.59 ಎಕರೆ ಜಮೀನನ್ನು ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣಕ್ಕೆ ಕಾಯ್ದಿರಿಸಲಾದ ಜಮೀನಿನ ಪಕ್ಕದಲ್ಲಿರುವ ಮನೆಗಳಿಗೆ ಬದಲಿ ಸಂಪರ್ಕ ರಸ್ತೆಯನ್ನು ಒದಗಿಸಬೇಕಾದ ಅವಶ್ಯಕತೆ ಇರುತ್ತದೆ. ಮಂಗಳೂರು ಮಹಾನಗರ ಪಾಲಿಕೆ ವತಿಯಿಂದ ಸಂಪರ್ಕ ರಸ್ತೆಯನ್ನು ನಿರ್ಮಾಣ ಮಾಡಲಾಗುತ್ತಿದೆ. ಸದರಿ ಮನೆಗಳಿಗೆ ಬದಲಿ ಸಂಪರ್ಕ ರಸ್ತೆಯನ್ನು ಒದಗಿಸಿದ ನಂತರ, ದಕ್ಷಿಣ ಕನ್ನಡ ಕ್ರಿಕೆಟ್ ಸಂಸ್ಥೆ ಮೂಲಕ ಕ್ರೀಡಾಂಗಣ ಅಭಿವೃದ್ಧಿಪಡಿಸಲು ಪರಿಗಣಿಸಲಾಗುವುದು.<br>ಮುಂದುವರೆದು, ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣಕ್ಕಾಗಿ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ಇವರಿಗೆ ಕಾಯ್ದಿರಿಸಲು ಉಳ್ಳಾಲ ತಾಲ್ಲೂಕು ಬಾಳೆಪುಣಿ ಗ್ರಾಮದ ಸರ್ವೆ ಸಂಖ್ಯೆ- 87/4 ರಲ್ಲಿ 9.17 ಎಕರೆ ಜಮೀನನ್ನು ಗುರುತಿಸಿದ್ದು, ಅಳತೆ ಕಾರ್ಯ ಪೂರ್ಣಗೊಂಡಿದ್ದು, ಜಮೀನನ್ನು ಕಾಯ್ದಿರಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ.<br>ಸದರಿ ಜಮೀನು ಹಸ್ತಾಂತರಿಸುವ ಪ್ರಕ್ರಿಯೆ ಪೂರ್ಣಗೊಂಡ ನಂತರ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ಮೂಲಕ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣ ಮಾಡಲು ಪರಿಗಣಿಸಲಾಗುವುದು. |
| ಇ) | ಅಂತರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣ ಇಲ್ಲದಿರುವ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮೂಲಭೂತ ಸೌಕರ್ಯಗಳಿಲ್ಲದಿದ್ದರೂ ಅಂತರಾಷ್ಟ್ರೀಯ ಕ್ರೀಡಾಂಗಣ ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? | |

**ಸಂಖ್ಯೆ: ವೈಎಸ್‌ಡಿ-ಇಬಿಬಿ/105/2024**

**( ಸಿದ್ದರಾಮಯ್ಯ )**
ಮುಖ್ಯಮಂತ್ರಿ